ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹುಣಸೂರು

ಸಿ.ಸಿ. 906/2019

ಸಿ.ಡಬ್ಲ್ಯೂ -5, ಪಿ.ಡಬ್ಲ್ಯೂ,4

ದಿಃ **20.08.2025** ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

| | |
|---|---|
| ಸಾಕ್ಷಿಯ ಹೆಸರು | ಶಿವಣ್ಣ |
| ಗಂಡ/ತಂದೆಯ ಹೆಸರು | ಶಂಭಯ್ಯ |
| ವಯಸ್ಸು | 50 ವರ್ಷ |
| ಕೆಲಸ | ವ್ಯವಸಾಯ |
| ವಾಸಸ್ಥಳ | ಮಾರನಹಳ್ಳಿ |

**ಮುಖ್ಯ ವಿಚಾರಣೆ ಮಾನ್ಯ ಎ.ಪಿ.ಪಿ.ಯವರಿಂದ:**

ಸಾಕ್ಷಿಗೆ ಮಹಜರ್ ನ್ನು ತೋರಿಸಿದ್ದು, ಅದರಲ್ಲಿರುವ ತನ್ನ ಸಹಿ ನೋಡಿ ಗುರುತಿಸಿದ್ದು, ಮಹಜರ್ ನ್ನು ಈಗಾಗಲೇ ನಿಪಿ-2 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು **ನಿಪಿ-2(ಬಿ)** ಎಂದು ಗುರುತಿಸಲಾಯಿತು. ನನ್ನ ಸಮಕ್ಷಮ ಯಾವುದೇ ಮಹಜರ್ ಕ್ರಮ ಕೈಗೊಂಡಿರುವುದಿಲ್ಲ. ನಾನು ಸುಮಾರು 7-8 ವರ್ಷಗಳ ಹಿಂದೆ ಮಧ್ಯಾಹ್ನದ ಸಮಯದಲ್ಲಿ ಬಿಳಿಕೆರೆ ಪೊಲೀಸ್ ಠಾಣೆಯಲ್ಲಿ ಸಹಿ ಹಾಕಿರುತ್ತೇನೆ. ನಾನು ಸಹಿ ಹಾಕುವ ಸಮಯದಲ್ಲಿ ಚಾಸಾ6 ರವರು ಇದ್ದರು.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಸ.ಸ.ಅ. ಪಾಟೀ ಸವಾಲು ಮಾಡಲು ಅನುಮತಿ ಕೋರಿರುತ್ತಾರೆ. ಅನುಮತಿ ನೀಡಲಾಗಿದೆ)**

ಪಾಟೀ ಸವಾಲು ಮಾನ್ಯ ಎ.ಪಿ.ಪಿ ವಕೀಲರಿಂದ

ದಿಃ 24.05.2016 ರಂದು ಪೊಲೀಸರು ಘಟನಾ ಸ್ಥಳಕ್ಕೆ ಬಂದಿದ್ದು, ಅಲ್ಲಿ ಚಾಸಾ-1 ರವರು ಹಾಜರಿದ್ದು, ಘಟನಾ ಸ್ಥಳವನ್ನು ತೋರಿಸಿದ ಮೇರೆಗೆ ನನ್ನ, ಚಾಸಾ-6 ರವರ ಸಮಕ್ಷಮ ಮಧ್ಯಾಹ್ನ 3 ರಿಂದ 3.45 ರವರೆಗೆ ನಿಪಿ-2 ರಂತೆ ಮಹಜರ್ ಕ್ರಮ ಕೈಗೊಂಡು, ಸ್ಥಳದಿಂದ ಮು.ಮಾ-1 ನ್ನು ಅಮಾನತ್ತುಪಡಿಸಿಕೊಂಡರು ಎಂದರೆ ಸರಿಯಲ್ಲ. ನಿಪಿ-2 ಕ್ಕೆ ಅಲ್ಲಿಯೇ ನನ್ನ ಸಹಿ ಪಡೆದಿರುತ್ತಾರೆಂದರೆ ಸರಿಯಲ್ಲ.

ನನಗೆ ಎಲ್ಲಾ ವಿಚಾರಗಳು ತಿಳಿದಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ, ಈ ದಿನ ಉದ್ದೇಶಪೂರ್ವಕವಾಗಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ನಿಜವಲ್ಲ.

**ಮರುವಿಚಾರಣೆ ಇಲ್ಲ.**

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.

ಓ ಹೇ ಕೇ ಸರಿ ಇದೆ.

ಅಪರ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ,
ಹುಣಸೂರು.

**ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹುಣಸೂರು**

**ಸಿ.ಸಿ. 906/2019**

**ಸಿ.ಡಬ್ಲ್ಯೂ -6, ಪಿ.ಡಬ್ಲ್ಯೂ-,5**

ದಿಃ **20.08.2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

| | |
|---|---|
| ಸಾಕ್ಷಿಯ ಹೆಸರು | ಸಿದ್ದಯ್ಯ |
| ಗಂಡ/ತಂದೆಯ ಹೆಸರು | ಲೇಟ್ ಚೆಲುವಯ್ಯ |
| ವಯಸ್ಸು | 76 ವರ್ಷ |
| ಕೆಲಸ | ವ್ಯವಸಾಯ |
| ವಾಸಸ್ಥಳ | ಮಾರನಹಳ್ಳಿ |

**<u>ಮುಖ್ಯ ವಿಚಾರಣೆ ಮಾನ್ಯ ಎ.ಪಿ.ಪಿ.ಯವರಿಂದ:</u>**

ಸಾಕ್ಷಿಗೆ ಮಹಜರ್ ನ್ನು ತೋರಿಸಿದ್ದು, ಅದರಲ್ಲಿರುವ ತನ್ನ ಸಹಿ ನೋಡಿ ಗುರುತಿಸಿದ್ದು, ಮಹಜರ್ ನ್ನು ಈಗಾಗಲೇ ನಿಪಿ-2 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು **ನಿಪಿ-2(ಸಿ)** ಎಂದು ಗುರುತಿಸಲಾಯಿತು. ನನ್ನ ಸಮಕ್ಷಮ ಯಾವುದೇ ಮಹಜರ್ ಕ್ರಮ ಕೈಗೊಂಡಿರುವುದಿಲ್ಲ. ನಾನು ಸುಮಾರು 10 ವರ್ಷಗಳ ಹಿಂದೆ ಮಧ್ಯಾಹ್ನದ ಸಮಯದಲ್ಲಿ ಬಿಳಿಕೆರೆ ಪೊಲೀಸ್ ಠಾಣೆಯಲ್ಲಿ ಸಹಿ ಹಾಕಿರುತ್ತೇನೆ. ನಾನು ಸಹಿ ಹಾಕುವ ಸಮಯದಲ್ಲಿ ಚಾಸಾ5 ರವರು ಇದ್ದರು. ಪೊಲೀಸರು ಹೇಳಿದ ಮೇರೆಗೆ ನಾನು ಸಹಿ ಹಾಕಿರುತ್ತೇನೆ. ಪೊಲೀಸರು ನನ್ನ ಮುಂದೆ ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಸ.ಸ.ಅ. ಪಾಟೀ ಸವಾಲು ಮಾಡಲು ಅನುಮತಿ ಕೋರಿರುತ್ತಾರೆ. ಅನುಮತಿ ನೀಡಲಾಗಿದೆ)**

<u>ಪಾಟೀ ಸವಾಲು ಮಾನ್ಯ ಎ.ಪಿ.ಪಿ ವಕೀಲರಿಂದ</u>

ದಿಃ 24.05.2016 ರಂದು ಪೊಲೀಸರು ಘಟನಾ ಸ್ಥಳಕ್ಕೆ ಬಂದಿದ್ದು, ಅಲ್ಲಿ ಚಾಸಾ-1 ರವರು ಹಾಜರಿದ್ದು, ಘಟನಾ ಸ್ಥಳವನ್ನು ತೋರಿಸಿದ ಮೇರೆಗೆ ನನ್ನ, ಚಾಸಾ-5 ರವರ ಸಮಕ್ಷಮ ಮಧ್ಯಾಹ್ನ 3 ರಿಂದ 3.45 ರವರೆಗೆ ನಿಪಿ-2 ರಂತೆ ಮಹಜರ್ ಕ್ರಮ ಕೈಗೊಂಡು, ಸ್ಥಳದಿಂದ ಮು.ಮಾ-1 ನ್ನು ಅಮಾನತ್ತುಪಡಿಸಿಕೊಂಡರು ಎಂದರೆ ಸರಿಯಲ್ಲ. ನಿಪಿ-2 ಕ್ಕೆ ಅಲ್ಲಿಯೇ ನನ್ನ ಸಹಿ ಪಡೆದಿರುತ್ತಾರೆಂದರೆ ಸರಿಯಲ್ಲ.

ನನಗೆ ಎಲ್ಲಾ ವಿಚಾರಗಳು ತಿಳಿದಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ, ಈ ದಿನ ಉದ್ದೇಶಪೂರ್ವಕವಾಗಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ನಿಜವಲ್ಲ.

**ಮರುವಿಚಾರಣೆ ಇಲ್ಲ.**

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.

ಓ ಹೇ ಕೇ ಸರಿ ಇದೆ.

ಅಪರ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ,
ಹುಣಸೂರು.